ಬೆಂಗಳೂರಿಗೆ 24 ಟಿಎಂಸಿ ಅಡಿ ಕಾವೇರಿ ನೀರು

ಪ್ರಜಾವಾಣಿ ವಾರ್ತೆ

ನವದೆಹಲಿ: ಬೆಂಗಳೂರು ಹಾಗೂ ಸುತ್ತಲಿನ ಪ್ರದೇಶಗಳಿಗೆ ಕುಡಿಯುವ ಉದ್ದೇಶಕ್ಕಾಗಿ ವಾರ್ಷಿಕವಾಗಿ 24 ಟಿಎಂಸಿ ಅಡಿ ಕಾವೇರಿ ನೀರನ್ನು ಮೀಸಲು ಇರಿಸಲು ಮತ್ತು ಅದನ್ನು ಜಲ ಮಂಡಳಿ ಬಳಸಿಕೊಳ್ಳಬೇಕು ಎಂದು ಜಲ ಸಂಪನ್ಮೂಲ ಇಲಾಖೆ ಆದೇಶ ಹೊರಡಿಸಿದೆ.

ಬುಧವಾರ ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಜಲ ಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಈ ವಿಷಯ ತಿಳಿಸಿದರು.

'ಬೆಂಗಳೂರಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ 24 ಟಿಎಂಸಿ ಅಡಿ ನೀರನ್ನು ಬಳಸಿಕೊಳ್ಳಬಹುದು ಎಂದು ಸುಪ್ರೀಂ ಕೋರ್ಟ್ 2018ರಲ್ಲಿ ತಿಳಿಸಿತ್ತು. ಆದರೆ, ಇದುವರೆಗೂ ಯಾರೂ ಈ ವಿಚಾರವಾಗಿ ಕ್ರಮ ತೆಗೆದುಕೊಂಡಿರಲಿಲ್ಲ. ಈ ಮೊದಲು ಕಡಿಮೆ ನೀರು ನಿಗದಿ ಮಾಡಲಾಗಿತ್ತು. ಈಗ ಉಳಿಕೆ 6 ಟಿಎಂಸಿ ಅಡಿ ನೀರನ್ನು ಬಳಸಿಕೊಂಡು, ಒಟ್ಟಾರೆ ಕುಡಿಯುವ ಉದ್ದೇಶಕ್ಕೆ 24 ಟಿಎಂಸಿ ಬಳಸಿಕೊಳ್ಳಲು ತೀರ್ಮಾನಿಸಿದ್ದೇವೆ. ಈ ಸಂಬಂಧ ಕ್ರಿಯಾ ಯೋಜನೆ ಸಿದ್ಧಪಡಿಸಲು ಜಲ ಮಂಡಳಿಗೆ ಸೂಚಿಸಲಾಗಿದೆ' ಎಂದು ಹೇಳಿದರು.

'ಮೇಕೆದಾಟು ಯೋಜನೆ ಪ್ರಾರಂಭ ಮಾಡಲು ಅನುಮತಿ ನೀಡಬೇಕು ಎಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಹಾಗೂ ಸುಪ್ರೀಂ ಕೋರ್ಟ್‌ನಲ್ಲಿ ಮನವಿ ಮಾಡುತ್ತೇವೆ. ಸಂಕಷ್ಟದ ಸಂದರ್ಭದಲ್ಲಿ ನೀರು ಹರಿಸಲು ಈ ಯೋಜನೆ ಸಹಕಾರಿಯಾಗುತ್ತದೆ. ಅಲ್ಲದೇ ತಮಿಳುನಾಡಿಗೆ ಈ ಯೋಜನೆಯಿಂದ ಹೆಚ್ಚು ಪ್ರಯೋಜನವಿದೆ' ಎಂದರು.

'ಸಂಕಷ್ಟಕಾಲದಲ್ಲೂ 300- 400 ಟಿಎಂಸಿ ಅಡಿ ನೀರು ಬಿಡಬೇಕು ಎಂದು ತಮಿಳುನಾಡಿನವರು ಕೇಳಿದ್ದರು. ಕೆಆರ್‌ಎಸ್‌ಗೆ ಒಳಹರಿವು ಸಂಪೂರ್ಣವಾಗಿ ನಿಂತೇ ಹೋಗಿದೆ. ಇದನ್ನು ಮನದಟ್ಟು ಮಾಡಿಕೊಡಲು ನಿರ್ಧಾರ ಮಾಡಿದ್ದೇವೆ' ಎಂದು ಅವರು ಹೇಳಿದರು.

'ಕುಡಿಯುವ ನೀರಿಗೆ ನಮ್ಮ ಮೊದಲ ಆದ್ಯತೆ. ಸುಪ್ರೀಂ ಕೋರ್ಟ್ ಕೊಟ್ಟಿರುವ ಆದೇಶ ಪಾಲಿಸುತ್ತಿದ್ದೇವೆ. ತಮಿಳುನಾಡಿನವರು ಏನಾದರೂ ಆಕ್ಷೇಪ ವ್ಯಕ್ತಪಡಿಸಲಿ, ನಮ್ಮ ಹಕ್ಕನ್ನು ನಾವೇಕೆ ಬಿಟ್ಟು ಕೊಡಬೇಕು. ಈ ಹಿಂದೆ ನೀಡಿರುವ ಆದೇಶವನ್ನೇ ಈಗ ಪಾಲಿಸುತ್ತಿದ್ದೇವೆ. ಕೆಆರ್‌ಎಸ್ ಅಥವಾ ಕಾವೇರಿ ಜಲಾನಯನ ಪ್ರದೇಶದ ಯಾವುದೇ ಭಾಗದಲ್ಲಾದರೂ ಇಷ್ಟು ಪ್ರಮಾಣದ ನೀರನ್ನು ನಾವು ಮೀಸಲಿರಿಸುತ್ತೇವೆ' ಎಂದು ಅವರು ಉತ್ತರಿಸಿದರು.

ಮೇಕೆದಾಟು ವಿಚಾರದ ಕುರಿತು ಮುಂದಿನ ವಾರ ಚರ್ಚೆ ಮಾಡೋಣ ಎಂದು ಪ್ರಾಧಿಕಾರ ತಿಳಿಸಿದೆ. ಅವರ ಮುಂದೆ ವಿಚಾರ ಮಂಡಿಸಲು ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಬೆಂಗಳೂರು ಬೆಳೆಯುತ್ತಿದೆ. ಮುಂದಿನ 20 ವರ್ಷವನ್ನು ಗಮನದಲ್ಲಿಟ್ಟು ಇಷ್ಟುಕೊಂಡು ಯೋಜನೆ ರೂಪಿಸಬೇಕು. ಆನೇಕಲ್, ಹಾರೋಹಳ್ಳಿ, ಬೆಂಗಳೂರು ಉತ್ತರ ಸೇರಿದಂತೆ ಸತ್ತಲಿಗೆ ಪ್ರದೇಶಗಳಿಗೆ ನೀರು ಕೊಡಲೇಬೇಕು ಎಂದರು.

ರಾಮನಗರ ಜಿಲ್ಲೆ ಹೆಸರು ಬದಲು: ಸಿ.ಎಂಗೆ ಪ್ರಸ್ತಾವ

ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಲು ಸರ್ವಾನುಮತದಿಂದ ಅಭಿಪ್ರಾಯ ಸಂಗ್ರಹಿಸಲು ಸಮಿತಿಗೆ ಅಧಿಕಾರ ನೀಡಿರುವುದಾಗಿ ಉಪ ಮುಖ್ಯಮಂತ್ರಿ ಶಿವಕುಮಾರ್ ಹೇಳಿದರು.

ರಾಮನಗರ ಜಿಲ್ಲೆಗೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಲು ಒತ್ತಾಯಿಸಿ, ಶೀಘ್ರದಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಅವರು ತಿಳಿಸಿದರು.

ಜಿಲ್ಲೆಗೆ ಮರು ನಾಮಕರಣ ಮಾಡುವುದು ಖಚಿತ ಎಂದ ಅವರು, ವೈಯಕ್ತಿಕ ನೆಲೆಯಲ್ಲಿ ಸಮೀಕ್ಷೆ ಮಾಡುತ್ತಿದ್ದೇನೆ. ಈವರೆಗೆ ಸಮೀಕ್ಷೆಗೆ ಜನರಿಂದ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದರು.

ರಾಮನಗರ ಜಿಲ್ಲೆಗೆ ಮರು ನಾಮಕರಣ ಮಾಡಿದ ನಂತರ ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಮಾಗಡಿ ತಾಲ್ಲೂಕುಗಳನ್ನು ಸ್ಯಾಟಲೈಟ್ ಟೌನ್‌ಗಳಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯೋಚಿಸಿದೆ. 'ನಮ್ಮ ಮೆಟ್ರೊ'ವನ್ನು ಎಲ್ಲ ನಾಲ್ಕು ತಾಲ್ಲೂಕುಗಳಿಗೂ ವಿಸ್ತರಿಸಲು ಸಮಿತಿಗೆ ನಡೆಸಲಾಗುವುದು ಎಂದು ಅವರು ಹೇಳಿದರು.

ಮಾಗಡಿ ಮತ್ತು ಕನಕಪುರ ತಾಲ್ಲೂಕುಗಳಿಗೆ ಕೈಗಾರಿಕೆಗಳನ್ನು ಆಕರ್ಷಿಸುವ ಉದ್ದೇಶದಿಂದ ಜಿಲ್ಲೆಯ ಹೆಸರು ಬದಲಿಸಲಾಗುತ್ತಿದೆ ಎಂದು ಅವರು ಹೇಳಿದರು.

ಗ್ರಾಮೀಣ ಸೇವೆ ಕಡ್ಡಾಯ ರದ್ದು ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಸ್ತು

ಬೆಂಗಳೂರು: ರಾಜ್ಯದಲ್ಲಿ ಎಂಬಿಬಿಎಸ್ ಮತ್ತು ಸ್ನಾತಕೋತ್ತರ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳು ಗ್ರಾಮೀಣ ಮತ್ತು ನಗರ ಪ್ರದೇಶದ ಸರ್ಕಾರಿ ಆಸ್ಪತ್ರೆಗಳಲ್ಲಿ ಒಂದು ವರ್ಷ ಕಡ್ಡಾಯವಾಗಿ ಸೇವೆ ಸಲ್ಲಿಸಬೇಕು ಎಂಬ ನಿಯಮ ರದ್ದುಪಡಿಸುವ ಉದ್ದೇಶದ 'ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಸುಗ್ರೀವಾಜ್ಞೆ –2023'ಕ್ಕೆ ರಾಜ್ಯಪಾಲರು ಬುಧವಾರ ಅಂಕಿತ ಹಾಕಿದ್ದಾರೆ.

2012ರ ಕಾಯ್ದೆ ಮತ್ತು 2015ರ ನಿಯಮಗಳ ಅನ್ವಯ ಎಂಬಿಬಿಎಸ್ ಮತ್ತು ವೈದ್ಯಕೀಯ ಸ್ನಾತಕೋತ್ತರ ಅಭ್ಯರ್ಥಿಗಳು ಗ್ರಾಮೀಣ ಮತ್ತು ನಗರ ಪ್ರದೇಶದ ಆರೋಗ್ಯ ಕೇಂದ್ರಗಳಲ್ಲಿ ಸೇವೆ ಸಲ್ಲಿಸುವುದು ಕಡ್ಡಾಯವಾಗಿತ್ತು.

ಕಾಯ್ದೆಗೆ ತಿದ್ದುಪಡಿ ತಂದಿರುವುದರಿಂದ ಇನ್ನು ಮುಂದೆ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಮಿತಿಗೊಳಿಸಿ ಅಭ್ಯರ್ಥಿಗಳು ಒಂದು ವರ್ಷದ ಗ್ರಾಮೀಣ ಸೇವೆ ಮಾಡಬೇಕಿದೆ. ಕೇಂದ್ರ ಅಥವಾ ರಾಜ್ಯ ಸರ್ಕಾರದ ಹುದ್ದೆಗಳಿಗಾಗಲಿ ಅಯ್ಯಯದರೆ, ಅಂಥವರಿಗೆ ವಿನಾಯಿತಿ ನೀಡಲು ಈ ತಿದ್ದುಪಡಿಯ ಮೂಲಕ ಅವಕಾಶ ಕಲ್ಪಿಸಲಾಗಿದೆ.

ಸಂಕ್ಷಿಪ್ತ ಸುದ್ದಿ

ಕೆ-ಸೆಟ್: ಪರೀಕ್ಷೆ ಮುಂದೂಡಿಕೆ

ಬೆಂಗಳೂರು: ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು (ಕೆ-ಸೆಟ್) ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮುಂದೂಡಿದೆ.

ಪರೀಕ್ಷೆ ನ.26ರಂದು ನಿಗದಿಯಾಗಿತ್ತು. ಮುಂದೂಡಿದ ಪರೀಕ್ಷೆಯನ್ನು ಡಿ. 31ರಂದು ನಡೆಸಲು ನಿರ್ಧರಿಸಲಾಗಿದೆ. ಮತ್ತೊಮ್ಮೆ ಪರಿಶೀಲಿಸಿ ಮರು ದಿನಾಂಕ ಖಚಿತಪಡಿಸಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್.ರಮ್ಯಾ ತಿಳಿಸಿದ್ದಾರೆ.

ಈ ಮೊದಲು ಮೈಸೂರು ವಿಶ್ವವಿದ್ಯಾಲಯ ಕೆ-ಸೆಟ್ ಪರೀಕ್ಷೆ ನಡೆಸುವ ಹೊಣೆಗಾರಿಕೆ ನಿಭಾಯಿಸುತ್ತಿತ್ತು. ಪರೀಕ್ಷಾ ನಕಲು ತಡೆಯಲು, ಸುಸೂತ್ರವಾಗಿ ಪರೀಕ್ಷೆಗಳನ್ನು ನಡೆಸಲು ವಿಫಲವಾದ ಕಾರಣ ಹೊಣೆಗಾರಿಕೆಯನ್ನು ಸರ್ಕಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿತ್ತು. ಹಾಗಾಗಿ, ಎರಡು ವರ್ಷಗಳಿಂದ ಪರೀಕ್ಷೆ ನಡೆದಿರಲಿಲ್ಲ. ನಿಗದಿಯಾಗಿದ್ದ ಪರೀಕ್ಷೆಯನ್ನು ಮತ್ತೆ ಮುಂದೂಡಲಾಗಿದೆ.

'ಸೇವಾದಳ ಶತಮಾನೋತ್ಸವ ಇಂದು'

ಬೆಂಗಳೂರು: 'ಸೇವಾದಳದ ಶತಮಾನೋತ್ಸವ ಮತ್ತು ರಾಜ್ಯಮಟ್ಟದ ಸಮಾವೇಶ ನಗರದ ಅರಮನೆ ಮೈದಾನದಲ್ಲಿ ಗುರುವಾರ (ನ. 9) ನಡೆಯಲಿದೆ' ಎಂದು ಸೇವಾದಳದ ಉಸ್ತುವಾರಿಯೂ ಆಗಿರುವ ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, 'ರಾಷ್ಟ್ರೀಯ ಸೇವಾದಳದ ಅಧ್ಯಕ್ಷ ಲಾಲ್ ಜಿ ಅವರು ಧ್ವಜಾರೋಹಣ ಮಾಡಲಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಸಚಿವರು, ಪಕ್ಷದ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ' ಎಂದರು.

'ಇದೇ ತಿಂಗಳ 28ಕ್ಕೆ ಸೇವಾದಳ 100 ವರ್ಷಗಳನ್ನು ಪೂರೈಸಲಿದೆ. ಈ ಹಿನ್ನೆಲೆಯಲ್ಲಿ ದೇಶದ ಎಲ್ಲ ರಾಜ್ಯಗಳಲ್ಲೂ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಆ ಮೂಲಕ, ಸೇವಾದಳದ ಇತಿಹಾಸದ ಕುರಿತು ಇಡೀ ದೇಶಕ್ಕೆ ಸಂದೇಶ ರವಾನಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಸೇವಾದಳದ ಮೂರು ಸಾವಿರ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ' ಎಂದೂ ತಿಳಿಸಿದರು.

ಸೇವಾದಳದ ಅಧ್ಯಕ್ಷ ರಾಮಚಂದ್ರಪ್ಪ ಮಾತನಾಡಿ, 'ಬ್ರಿಟಿಷರ ಹಿಂಸೆ ತಾಳಲಾರದೆ ಹುಟ್ಟಿಕೊಂಡ ಸಂಘಟನೆ ಸೇವಾದಳ. ಎರಡು ವರ್ಷಗಳಿಂದ ನಾನು ಅಧ್ಯಕ್ಷನಾಗಿದ್ದು, ಈ ಅವಧಿಯಲ್ಲಿ ರಾಜ್ಯಮಟ್ಟದ, ಜಿಲ್ಲಾಮಟ್ಟದ ಪದಾಧಿಕಾರಿಗಳನ್ನು ನೇಮಿಸಿದ್ದೇನೆ. ದೊಡ್ಡಮಟ್ಟದಲ್ಲಿ ಶತಮಾನೋತ್ಸವ ನಡೆಯಲಿದೆ' ಎಂದರು.

'ವಿಮೋಚನೆಯ ರಹಸ್ಯ' 11ರಂದು ಬಿಡುಗಡೆ

ಬೆಂಗಳೂರು: ದೇವಾಸೀರ್ ಲಾರಿ ಅವರು ರಚಿಸಿರುವ 'ವಿಮೋಚನೆಯ ರಹಸ್ಯ' ಅಧ್ಯಾತ್ಮ ಕೃತಿ ಕೇರಳದ ಮನುಜ್ಯೋತಿ ಆಶ್ರಯದಲ್ಲಿ ನ.11ರಂದು ಇಲ್ಲಿನ ಜಿಮ್‌ಖಾನ ಕ್ಲಬ್‌ನಲ್ಲಿ ಬಿಡುಗಡೆಗೊಳ್ಳಲಿದೆ.

ದೇಹ, ಪ್ರಾಣ, ಆತ್ಮ, ಮನಸ್ಸುಗಳನ್ನು ಹೇಗೆ ಶುಚಿಗೊಳಿಸಬಹುದು? ಈ ಪುಸ್ತಕ ಶರಣಬಿಂದ ನಮ್ಮನ್ನು ನಾವು ಹೇಗೆ ಪವಿತ್ರಗೊಳಿಸಬಹುದು ಎಂಬುದನ್ನು ಅರಿಯಲು ಕೃತಿ ನೆರವಾಗಲಿದೆ. ಮನುಜ್ಯೋತಿ ಆಶ್ರಮದ ಸ್ಥಾಪಕ ಲಹರಿ ಕೃಷ್ಣ ಅವರ ಭಾಷಣ ಮತ್ತು ಪ್ರವಚನಗಳನ್ನು ಸಂಗ್ರಹಿಸಿ ಕನ್ನಡದಲ್ಲಿ ನೀಡಲಾಗಿದೆ ಎಂದು ಮನುಜ್ಯೋತಿ ಆಶ್ರಮದ ಮುಖ್ಯಸ್ಥ ಲಿಯೋ ಸಿ. ಲಾರಿ ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹಣತೆಗಳ ಲೋಕ....

ದೀಪಗಳ ಹಬ್ಬ ದೀಪಾವಳಿಯ ಪ್ರಯುಕ್ತ ನಗರದ ಗಾಂಧಿ ಬಜಾರ್‌ನಲ್ಲಿ ಮಹಿಳೆಯರು ಮಣ್ಣಿನ ಹಣತೆಗಳನ್ನು ಖರೀದಿಸುತ್ತಿರುವುದು ಕಂಡು ಬಂತು

ಪ್ರಜಾವಾಣಿ ಚಿತ್ರ: ಎಂ.ಎಸ್.ಮಂಜುನಾಥ್

ವಿ.ವಿ ಕಾಯ್ದೆ ತಿದ್ದುಪಡಿಗೆ ಸಮಿತಿ

ಬೆಂಗಳೂರು: ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆಗೆ (2000) ತಿದ್ದುಪಡಿ ತರುವ ಕುರಿತು ಪರಿಶೀಲಿಸಲು ನಿವೃತ್ತ ಐಎಎಸ್ ಅಧಿಕಾರಿ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗುತ್ತಿದೆ.

ವಿಶ್ರಾಂತ ಕುಲಪತಿಗಳು, ನಿವೃತ್ತ ಕುಲಸಚಿವರು, ಅಧ್ಯಾಪಕರನ್ನು ಒಳಗೊಂಡ ತಜ್ಞರ ಸಮಿತಿ ರಚಿಸಬೇಕು. ಈ ಸಮಿತಿ ಕಾಯ್ದೆಯಲ್ಲಿನ ನ್ಯೂನತೆಗಳನ್ನು ಪರಿಶೀಲಿಸಿ, ತಿದ್ದಪಡಿ ಮಾಡಬೇಕಿರುವ ಅಂಶಗಳ ಕುರಿತು ಒಂದು ತಿಂಗಳ ಒಳಗಾಗಿ ವರದಿ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಉನ್ನತ ಶಿಕ್ಷಣ ಇಲಾಖೆ ಹೆಚ್ಚುವರಿ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

ವಿಶ್ವವಿದ್ಯಾಲಯಗಳಲ್ಲಿ ಉನ್ನತ ಗುಣಮಟ್ಟದ ಸಾಧಾರಣೆ, ಶಿಕ್ಷಣದ ಶ್ರೇಷ್ಠತೆಯ ಸಾಧನೆಗಾಗಿ ಬೋಧನೆ, ಕಲಿಕೆ, ಸಂಶೋಧನಾ ಕ್ಷೇತ್ರಗಳಲ್ಲಿ ಸುಧಾರಣೆ ತರಲು, ಶೈಕ್ಷಣಿಕ ಸ್ವಾತಂತ್ರ್ಯ ಮತ್ತು ಸ್ವಾಯತ್ತತೆ ದೊರಕಿಸಲು, ಆಡಳಿತದಲ್ಲಿ ಸುಧಾರಣೆ ತರಲು ಹಿಂದೆ ಕಾಯ್ದೆ ರೂಪಿಸಲಾಗಿತ್ತು. ಈ ಕಾಯ್ದೆ ಹಲವು ನ್ನೂನತೆಗಳಿಂದ ಕೂಡಿದೆ ಎಂಬ ಬಗ್ಗೆ ಹಲವು ದೂರುಗಳು ಸಲ್ಲಿಕೆಯಾಗಿರುವ ಕಾರಣ ತಿದ್ದುಪಡಿ ಮಾಡಲಾಗುತ್ತಿದೆ ಎಂದು ವಿವರಿಸಿದ್ದಾರೆ.

PUBLIC NOTICE

Public are hereby notified that our client proposes to develop the property and enter into a Joint Development Agreement with M/s. United Oxygen Company Private Limited ('Owner'), the Owner of the property situated at Hoodi Village, Krishnarajapura Hobli, Bangalore East Taluk, Bangalore which is more particularly described in the Schedule hereunder written and hereinafter referred to as **"Schedule Property"**. The Owner has represented to our client that they are the absolute owners of the Schedule Property having exclusive possession thereof and that they have neither conveyed nor have entered into any agreement or arrangement with any person/s for sale/transfer/development/assignment of the Schedule Property.

Any person or persons asserting any right, title, interest or claim in the Schedule Property or any part thereof, in any manner whatsoever or having any claim against the Schedule Property or the documents thereof or against the Owner or objecting to such transaction with our client, should write to the undersigned within **Fourteen (14) days** from the date of issuance of this notice with all documentary proof on which they are basing and asserting their rights with regard to Schedule Property or any part thereof, after which period our client shall proceed on the basis that there are no claims/objections of whatsoever nature with regard to the Schedule Property and to the proposed transaction.

SCHEDULE PROPERTY

All that piece and parcel of land measuring 80,123 Sq. Ft., carved out of larger extent of land in **Survey No. 28/2**, converted for nonagricultural commercial purposes vide revised Official Memorandum dated 06.09.2016, bearing No. ALN/SR-56/73-74 issued by the Deputy Commissioner, Bangalore District, Bangalore and presently coming within the revenue jurisdiction of Bruhat Bengaluru Mahanagara Pallike (BBMP), Hoodi Sub Division, Bangalore and bearing **Municipal Khata No. 30 (old no. 31)**, situated at Hoodi Village, Krishnarajapura Hobli, Whitefield Main Road, Bangalore and bounded on the:

East by : Driveway and thereafter property of Bhoruka Tech Park;
West by : Land bearing Survey No. 28/1 and side road;
North by : Remaining portion of land in Municipal No.30 (Sy. No. 28/2); and
South by : Driveway and thereafter Bangalore – Whitefield road (Hoodi Road).

Mr. S T Prashantha Kumar, Senior Partner,
Mr. B.C. Keerthi Kishore, Group Head,
Fox Mandal & Associates, Solicitors & Advocates,
FM House, 6/12, Primrose Road,
Bangalore – 560025, Karnataka, India
Phone: +91 80 2559 5911
e-mail : prashantha.kumar@foxmandal.in
Dated: 09/11/2023

FoxMandal Solicitors & Advocates

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ
ಮಹಾನಗರ ಆಯುಕ್ತರ ಕಚೇರಿ, ಬಿ.ಎಂ.ಆರ್.ಡಿ.ಎ, ನಂ. 1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-560 052. ದೂರವಾಣಿ : 080-22263479

ಸಂಖ್ಯೆ: ಬಿಎಂಆರ್‌ಡಿಎ/ಲೆಕ್ಕಾಚಾರ/16/2023-24 ದಿನಾಂಕ:02.11.2023

ಟೆಂಡರ್ ಪ್ರಕಟಣೆ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಚ್ಚುವರಿ ನಿಧಿಗಳ ಹೂಡಿಕೆಗಾಗಿ ಇ-ಪರಾಜು GoK ಯ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ ವಿಳಾಸ: www.kppp.karnataka.gov.in ನಲ್ಲಿ ಪಡೆಯಬಹುದಾಗಿರುತ್ತದೆ.

ಸಹಿ/-
ಸಹಾಯಕ ಮಹಾನಗರ ಆಯುಕ್ತರು,
ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.

TeamLease® Putting India to Work

ಟೀಂಲೀಸ್ ಸರ್ವೀಸಸ್ ಲಿಮಿಟೆಡ್
CIN: L74140KA2000PLC118395
ನೋಂದಾಯಿತ ಕಚೇರಿ: 315 ವರ್ಕ್ ಇಮೇಜ್ ಕ್ಯಾಪಿಟಲ್, ಬನ್ನೆರ್ಘಟ್ಟ ಬಿಲ್ಡಿಂಗ್, ನಂ.77, ಕೋರಮಂಗಲ ಇಂಡಸ್ಟ್ರಿಯಲ್ ಲೇಔಟ್, ಹೊಸೂರು ವಿಮಾನ ಕಾರ್ಯ ರಸ್ತೆ, ಕೋರಮಂಗಲ, ಬೆಂಗಳೂರು – 560095, ಕರ್ನಾಟಕ, ಭಾರತ.
E-MAIL: corporateaffairs@teamlease.com | WEBSITE: https://group.teamlease.com/

30ನೇ ಸೆಪ್ಟೆಂಬರ್ 2023ಕ್ಕೆ ಕೊನೆಯಾದ ತ್ರೈಮಾಸಿಕ ಮತ್ತು ಅರ್ಧ ವರ್ಷಕ್ಕೆ ವಿಸ್ತೃತ ಅಪರಿಶೋಧಿತ ಆರ್ಥಿಕ ಫಲಿತಾಂಶಗಳ ಸಾರಾಂಶ

(ಲೀಲು ತಲಾವಾರು ದತ್ತಮಾಹಿತಿಯನ್ನು ಹೊರತುಪಡಿಸಿ ಉಳಿದ ಅಂಕಿಗಳು ಕೋಟಿ ರೂಪಾಯಿಗಳಲ್ಲಿ)

ವಿವರಗಳು	ಏಕೀಕೃತ		ಕ್ರೋಢೀಕೃತ	
	30.09.2023ಕ್ಕೆ ಕೊನೆಯಾದ 3 ತಿಂಗಳಿಗೆ	ಹಿಂದಿನ ಅವಧಿಯ 3 ತಿಂಗಳಿಗೆ ಕೊನೆಯಾದ 30.09.2022ಕ್ಕೆ	30.09.2023ಕ್ಕೆ ಕೊನೆಯಾದ 3 ತಿಂಗಳಿಗೆ	ಹಿಂದಿನ ಅವಧಿಯ 3 ತಿಂಗಳಿಗೆ ಕೊನೆಯಾದ 30.09.2022ಕ್ಕೆ
	ಅಪರಿಶೋಧಿತ	ಅಪರಿಶೋಧಿತ	ಅಪರಿಶೋಧಿತ	ಅಪರಿಶೋಧಿತ
ಕಾರ್ಯಾಚರಣೆಗಳಿಂದ ಒಟ್ಟು ಆದಾಯ	2,052.24	1,708.17	2,272.60	1,955.05
ಸದರಿ ಅವಧಿಗೆ ನಿವ್ವಳ ಲಾಭ / (ನಷ್ಟ) (ತೆರಿಗೆಗೆ ಮುನ್ನ, ಅಸಾಮಾನ್ಯ ಮತ್ತು/ಅಥವಾ ಅಸಾಧಾರಣ ಬಂಬಂಗಳು)	26.88	26.98	29.40	32.16
ಸದರಿ ಅವಧಿಗೆ ತೆರಿಗೆಗೆ ನಂತರ ನಿವ್ವಳ ಲಾಭ / (ನಷ್ಟ) (ಅಸಾಮಾನ್ಯ ಮತ್ತು/ ಅಥವಾ ಅಸಾಧಾರಣ ಬಂಬಂಗಳ ನಂತರ)	25.33	25.89	27.65	31.62
ಸದರಿ ಅವಧಿಗೆ ಒಟ್ಟು ಸಮಗ್ರವಾದ ಆದಾಯ [ಸದರಿ ಅವಧಿಗೆ ತೆರಿಗೆ ಕಳೆದ ನಂತರದ ಲಾಭ / (ನಷ್ಟ) ಸೇರಿದಂತೆ ಮತ್ತು ಇತರೆ ಸಮಗ್ರ ಆದಾಯ (ತೆರಿಗೆ ಕಳೆದು)]	25.37	26.11	27.41	32.38
ಪೇಯಪ್ಸ್-ಅಪ್ ಇಕ್ವಿಟಿ ಶೇರು ಬಂಡವಾಳ (ಮುಖ ಬೆಲೆ ತಲಾ 10 ರೂ.)	16.77	17.10	16.77	17.10
ಮೀಸಲುಗಳು (ಮರುಮೌಲ್ಯಮಾಪನ ಮೀಸಲುಗಳನ್ನು ಹೊರತು)–ಹಿಂದಿನ ಲೆಕ್ಕ ವರ್ಷದ ಬ್ಯಾಲೆನ್ಸ್ ಷೀಟ್ ಪ್ರಕಾರ	760.38	661.42	790.53	676.11
ತಲಾ ಶೇರಿಗೆ ಗಳಿಕೆ (ಮುಖ ಬೆಲೆ ತಲಾ 10 ರೂ.) (ವಾರ್ಷಿಕಕರಣಗೊಂಡಿಲ್ಲ)		